# ಅಪರ ಸಿವಿಲ್ ನ್ಯಾಯಾಧೀಶರು ಜೆಎಂಎಫ್‌ಸಿ ನ್ಯಾಯಾಲಯ, ಚನ್ನಪಟ್ಟಣ

## CC No. 1231/2023

| | | |
|---|---|---|
| ಸಾಕ್ಷಿದಾರರ ಹೆಸರು | : | ಮಧುಸೂದನ್ |
| ತಂದೆಯ ಹೆಸರು | : | ರಾಮಲಿಂಗಯ್ಯ |
| ವಯಸ್ಸು | : | 40 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸಸ್ಥಳ | : | ಚಿಕ್ಕನದೊಡ್ಡಿ, ಚನ್ನಪಟ್ಟಣ. |

ಸಾಕ್ಷಿಯನ್ನು ಕರೆಯಿಸಲಾಯಿತು ಪ್ರಮಾಣ ವಚನ ಬೋಧಿಸಲಾಯಿತು.
ಮುಖ್ಯ ವಿಚಾರಣೆ ಎ.ಪಿ.ಪಿ ಯವರಿಂದ : ದಿಃ 26.03.2026

ಚಾಸಾ.2 ನನಗೆ ಗೊತ್ತಿಲ್ಲ. ಆರೋಪಿ ಗೊತ್ತಿಲ್ಲ. ಪೋಲೀಸರು ನನ್ನ ಸಮಕ್ಷಮ ಯಾವುದೇ ಅಮಾನತ್ತು ಮಹಜರ್ ಮಾಡಿಲ್ಲ ಮತ್ತು ಆರೋಪಿತನಿಂದ ಯಾವುದೇ ವಸ್ತುವನ್ನು ಅಮಾನತ್ತು ಪಡಿಸಿಕೊಂಡಿಲ್ಲ. ಘಟನೆಯ ಬಗ್ಗೆ ಗೊತ್ತಿಲ್ಲ. ಸಾಕ್ಷಿಗೆ ಒಂದು ಮಹಜರ್ ಅನ್ನು ತೋರಿಸಿ ಅದರಲ್ಲಿ ತಮ್ಮ ಸಹಿ ಇದೆಯೇ ಎಂದು ಕೇಳಲಾಗಿ ಸಾಕ್ಷಿ ಸಹಿ ನೋಡಿ ಗುರುತಿಸಿದ್ದು ಸದರಿ ದಾಖಲೆಯನ್ನು ನೋಡಿ ತನ್ನ ಸಹಿಯನ್ನು ಗುರುತಿಸಿದ್ದು ಸದರಿ ದಾಖಲೆಯು ಅಮಾನತ್ತು ಮಹಜರ್ ಆಗಿದ್ದು ಅದು ಈಗಾಗಲೇ ನಿಪಿ.2 ಎಂದು ಗುರುತಿಸಲಾಗಿದ್ದು ಸಾಕ್ಷಿ ಸಹಿಯನ್ನು ನಿಪಿ.2(ಸಿ) ಎಂದು ಗುರುತಿಸಲಾಯಿತು. ಅಮಾನತ್ತು ಮಹಜರ್ ನಲ್ಲಿ ಬರೆದ ವಿಷಯಗಳು ನನಗೆ ಗೊತ್ತಿಲ್ಲ. ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ.

(**ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ತೀರ್ಮಾನಿಸಿ ಅಭಿಯೋಜಕರ ಕೋರಿಕೆಯ ಮೇರೆಗೆ ಪಾಟೀ ಸವಾಲುಗೆ ಅನುಮತಿಸಲಾಯಿತು. ಪಾಟೀ ಸವಾಲುಃ ಎ.ಪಿ.ಪಿ. ಯವರಿಂದಃ-**

ದಿಃ05.04.2023ರಂದು ಬೆಳಿಗ್ಗೆ 11.00 ಗಂಟೆ ಸುಮಾರಿಗೆ ನನ್ನ ಮತ್ತು ಚಾಸಾ.3ರವರ ಸಮಕ್ಷಮ ಪೊಲೀಸರು ದಾಳಿ ಮಾಡಿ ಚನ್ನಪಟ್ಟಣದ ಕುವೆಂಪುನಗರದ 8ನೇ ಕ್ರಾಸ್ ನಲ್ಲಿ ಅಮಾನತ್ತು ಕ್ರಮ ಕೈಗೊಂಡು, 180 ಎಂಎಲ್ ನ 24 ಹಯ್ ವರ್ಡ್ಸ್ ಮದ್ಯದ ಪೌಚುಗಳು, 180 ಎಂಎಲ್‌ನ 8ಓಲ್ಡ್ ಟವರಿನ್

ಪೌಚುಗಳು ಮತ್ತು 650 ಎಂಎಲ್‌ನ 10 ಯು.ಬಿ. ಬಿಯರ್ ಬಾಟಲ್‌ಗಳನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಈಗ ಓದಿ ಹೇಳಿ ಕೇಳಿಕೊಂಡ ನಿ.ಪಿ.7ರಂತೆ ತನಿಖಾಧಿಕಾರಿಯವರ ಮುಂಂದೆ ನನ್ನ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿ ಪರಃ ವಕೀಲರಿಂದಃ</u>**

ಆರೋಪಿತರ ಪರವಾಗಿ ಪಾಟೀ ಸವಾಲು ಇರುವುದಿಲ್ಲ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸ.ಒ

ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ ಚನ್ನಪಟ್ಟಣ.